೨. ಕರ್ನಾಟಕ ಧನವಿನಿಯೋಗ (ಸಂಖ್ಯೆ:೫) ವಿಧೇಯಕ ೧೯೮೬

ಪರ್ಯಾಲೋಚನ ಪ್ರಸ್ತಾವ

ಶ್ರೀ ಎ. ಲಕ್ಷ್ಮೀಸಾಗರ್ (ಕಾನೂನು ಮಂತ್ರಿ ಮತ್ತು ಆಹಾರ ಸಚಿವರು).— ಮಾನ್ಯ ಅಧ್ಯಕ್ಷರೇ, ಮುಖ್ಯಮಂತ್ರಿಗಳ ಪರವಾಗಿ ಕರ್ನಾಟಕ ಧನ ವಿನಿಯೋಗ (ಸಂಖ್ಯೆ: ೫) ವಿಧೇಯಕ, ೧೯೮೬ನ್ನು ಪರ್ಯಾಲೋಚಿಸಬೇಕೆಂದು ಸೂಚಿಸುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಶ್ರೀ ಎ. ಲಕ್ಷ್ಮೀಸಾಗರ್.— ಮಾನ್ಯ ಅಧ್ಯಕ್ಷರೇ, ಇದರ ಬಗ್ಗೆ ಈಗಾಗಲೇ ಚರ್ಚೆಯಾಗಿದೆ ಮತ್ತು ಚರ್ಚೆಗೆ ಮಾನ್ಯ ಮಂಖ್ಯಿಮಂತ್ರಿಗಳು ಉತ್ತರ ಸಹ ಕೊಟ್ಟಿದ್ದಾರೆ. ಆದುದರಿಂದ ಇದಕ್ಕೆ ಒಪ್ಪಿಗೆ ನೀಡಬೇಕೆಂದು ಕೋರುತ್ತೇನೆ.

ಅಧ್ಯಕ್ಷರು.— ಪ್ರಸ್ತಾವ ಏನೆಂದರೆ : '೧೯೮೬ನೇ ಕರ್ನಾಟಕ ಧನವಿನಿಯೋಗ (ಸಂಖ್ಯೆ:೫) ವಿಧೇಯಕವನ್ನು ಪರ್ಯಾಲೋಚಿಸುವುದು.'

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಅಧ್ಯಕ್ಷರು.—''೨ನೇ ಮಂತ್ರಿ ೩ನೇ ಖಂಡ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ.''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ೨ ಮತ್ತು ೩ ಸೇರಿದಂತೆ ಈ ವಿಧೇಯಕಕ್ಕೆ ಸೇರಿಸಲ್ಪಟ್ಟಿತು

ಖಂಡ ೧ ಇತ್ಯಾದಿ

ಅಧ್ಯಕ್ಷರು.— ಪ್ರಸ್ತಾವ ಏನೆಂದರೆ: ''ಮೊದಲನೇ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ.''

ಪ್ರಸ್ತಾವವನ್ನು ಅಂಗೀಕರಿಸಲಾಯಿತು

ಮೊದಲನೇ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ಈ ವಿಧೇಯಕಕ್ಕೆ ಸೇರಿಸಲಾಯಿತು.

ಪ್ರಸ್ತಾವದ ಅಂಗೀಕಾರ

ಶ್ರೀ ಎ. ಲಕ್ಷ್ಮೀಸಾಗರ್(ಕಾನೂನು ಮತ್ತು ಆಹಾರ ಸಚಿವರು).—ಕರ್ನಾಟಕ ಧನವಿನಿಯೋಗ (ಸಂಖ್ಯೆ : ೫) ವಿಧೇಯಕ, ೧೯೮೬ನ್ನು ಅಂಗೀಕರಿಸಬೇಕೆಂದು ಕೋರುತ್ತೇವೆ.

ಅಧ್ಯಕ್ಷರು.— ಪ್ರಸ್ತಾವ ಏನೆಂದರೆ : '೧೯೮೬ರ ಕರ್ನಾಟಕ ಧನ ವಿನಿಯೋಗ (ಸಂಖ್ಯೆ : ೫) ವಿಧೇಯಕವನ್ನು ಅಂಗೀಕರಿಸುವುದು.'

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಂಸೂದೆಗೆ ಸರ್ವಾನುಮತದಿಂದ ಒಪ್ಪಿಗೆ ನೀಡಲಾಯಿತು.